# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1387

ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 20.03.2025.

ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ನಗರದ ಜಿಲ್ಲಾ ಕಾರಾಗೃಹವನ್ನು ಬಂಟ್ವಾಳ ತಾಲ್ಲೂಕಿನ ಬಾಳೆಪುಣೆಗೆ ವರ್ಗಾವಣೆ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ; ಬಾಳೆಪುಣೆಯಲ್ಲಿ ನೂತನ ಕಾರಾಗೃಹ ಕಟ್ಟಡ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ; ಇದಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ; ಸ್ಥಳಾಂತರಗೊಳಿಸಲು ದಿನಾಂಕವನ್ನು ಗೊತ್ತುಪಡಿಸಲಾಗಿದೆಯೇ; (ವಿವರ ನೀಡುವುದು) | ಮಂಗಳೂರು ಜಿಲ್ಲಾ ಕಾರಾಗೃಹವನ್ನು ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮಕ್ಕೆ ವರ್ಗಾಯಿಸಲು ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.<br><br>1. ಮಂಗಳೂರು ಕೇಂದ್ರ ಕಾರಾಗೃಹವನ್ನು ನಿರ್ಮಾಣ ಮಾಡುವ ಸಂಬಂಧ ಜಿಲ್ಲಾಡಳಿತದಿಂದ ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮದಲ್ಲಿ 63 ಎಕರೆ 89 ಸೆಂಟ್ಸ್ ಜಮೀನು ಮಂಜೂರು ಮಾಡಲಾಗಿರುತ್ತದೆ.<br><br>2. ಸದರಿ ನೂತನ ಜಮೀನಿನ ಸುತ್ತಲೂ ರೂ.211.66 ಲಕ್ಷಗಳ ವೆಚ್ಚದಲ್ಲಿ ಕಾಂಪೌಂಡ್ ಗೋಡೆ ನಿರ್ಮಿಸಲಾಗಿರುತ್ತದೆ.<br><br>3. ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ಕುಖ್ಯಾತ ಮತ್ತು ಭೂಗತ ಜಗತ್ತಿನ ಜೊತೆ ಸಂಪರ್ಕ ಹೊಂದಿರುವ ಹಲವಾರು ಬಂದಿಗಳು ದಾಖಲಾಗುತ್ತಿದ್ದು, ಸದರಿ ಕಾರಾಗೃಹವನ್ನು ಅತಿ ಸೂಕ್ಷ್ಮ ಕಾರಾಗೃಹವೆಂದು ಪರಿಗಣಿಸಲಾಗಿರುವುದರಿಂದ, ಮಂಗಳೂರಿನ ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮದಲ್ಲಿ 1009 ಬಂದಿಗಳ ಸಾಮರ್ಥ್ಯದ ನೂತನ ಕೇಂದ್ರ ಕಾರಾಗೃಹ ನಿರ್ಮಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 214 ಪಿಆರ್‌ಎ 2018 ದಿನಾಂಕ:01-03-2019 ರನ್ವಯ, ರೂ.110.00 ಕೋಟಿ ಅನುದಾನಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡಿ, ಸದರಿ ರೂ.110.00 ಕೋಟಿಗಳ ಪೂರ್ಣ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಸದರಿ ಕಾಮಗಾರಿ ಯನ್ನು ಲೋಕೋಪಯೋಗಿ ಇಲಾಖೆ, |

| | | |
|---|---|---|
| | | ಮಂಗಳೂರು ವಿಭಾಗರವರಿಂದ ಮೊದಲನೇ ಹಂತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.<br>4. ಪ್ರಸ್ತುತ, ಮಂಗಳೂರು ನೂತನ ಕೇಂದ್ರ ಕಾರಾಗೃಹದ ಮೊದಲನೇ ಹಂತದ ಕಾಮಗಾರಿಗಳು ಪೂರ್ಣಗೊಂಡಿದ್ದು, ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗ ಇವರು 2ನೇ ಹಂತದ ಕಾಮಗಾರಿಗಳಿಗೆ ರೂ.195.00 ಕೋಟಿಗಳ ಅಂದಾಜು ಪಟ್ಟಿಯನ್ನು ಸಲ್ಲಿಸಿರುತ್ತಾರೆ.<br>5. ಅನುದಾನದ ಲಭ್ಯತೆಯನುಸಾರ ಕಾಮಗಾರಿ ಯನ್ನು ಪೂರ್ಣಗೊಳಿಸಿ, ಕಾರಾಗೃಹವನ್ನು ಸ್ಥಳಾಂತರಿಸಲು ಕ್ರಮವಹಿಸಲಾಗುವುದು. |
| ಆ) | ಮಂಗಳೂರು ಜಿಲ್ಲಾ ಕಾರಾಗೃಹದ ದಾರಿಯಲ್ಲಿ ಹೋಗುವವರು ಮಾದಕ ದ್ರವ್ಯ, ಮೊಬೈಲ್ ಫೋನ್ ಗಳನ್ನು ರಸ್ತೆಯಿಂದ ಕಾರಾಗೃಹಕ್ಕೆ ಎಸೆದ ಬಗ್ಗೆ ಮತ್ತು ಕಾರಾಗೃಹದಲ್ಲಿ ಯಥೇಚ್ಛವಾಗಿ ಮಾದಕ ದ್ರವ್ಯ ಮತ್ತು ಮೊಬೈಲ್ ಫೋನ್ ಬಳಕೆಯಿಂದ ಗುಂಪು ಘರ್ಷಣೆ ನಡೆಯುತ್ತಿದ್ದು, ನಿಯಂತ್ರಣಕ್ಕೆ ಯಾವ ಕ್ರಮಕೈಗೊಳ್ಳುಲಾಗಿದೆ: | ಮಂಗಳೂರು ಕಾರಾಗೃಹದಲ್ಲಿ ಬಂದಿಗಳು ನಿಷೇಧಿತ ವಸ್ತುಗಳ ಬಳಕೆಯನ್ನು ಮಾಡದಂತೆ ಹಾಗೂ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ತಡೆಗಟ್ಟುವ ನಿಟ್ಟಿನಲ್ಲಿ, ಈಗಾಗಲೇ ತೆಗೆದುಕೊಂಡ ಅಗತ್ಯ ಕ್ರಮಗಳ ವಿವರಗಳು ಈ ಕೆಳಕಂಡಂತಿರುತ್ತದೆ.<br>- ದಿನಾಂಕ 24.02.2025 ರಂದು ಸಮಯ 16.25ಕ್ಕೆ ಕಾರಾಗೃಹದ ಹೊರಗೋಡೆಯ ಮುಖ್ಯರಸ್ತೆಯಿಂದ ಒಳಭಾಗಕ್ಕೆ ಇಬ್ಬರು ಅಪರಿಚಿತ ವ್ಯಕ್ತಿಗಳು ದ್ವಿಚಕ್ರ ವಾಹನದಲ್ಲಿ ಬಂದು ಒಂದು ಪೊಟ್ಟಣವನ್ನು ಎಸೆದ ಕುರಿತಂತೆ ಬರ್ಕೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 23/2025 ಬಿ. ಎನ್. ಎಸ್ 323 ಮತ್ತು ಕರ್ನಾಟಕ ಪ್ರಿಸನ್ಸ್ ಅಮೆಂಡ್‌ಮೆಂಟ್ ಆಕ್ಟ್ 2022 U/s 42 ರಡಿಯಲ್ಲಿ ಪ್ರಕರಣ ದಾಖಲಿಸಲಾಗಿರುತ್ತದೆ.<br>- ಕಾರಾಗೃಹಕ್ಕೆ ಮಾದಕ ವಸ್ತುಗಳ ಸರಬರಾಜು ಮತ್ತು ಬಂದಿಗಳ ಬಳಿ ತಪಾಸಣೆ ಸಮಯದಲ್ಲಿ ನಿಷೇಧಿತ ವಸ್ತುಗಳು ದೊರೆತ ಕುರಿತು ಒಟ್ಟು 9 ಪ್ರಕರಣಗಳನ್ನು ಬರ್ಕೆ ಪೊಲೀಸ್ ಠಾಣೆಯಲ್ಲಿ ದಾಖಲಿಸಲಾಗಿದ್ದು ತನಿಖೆ ಪ್ರಗತಿಯಲ್ಲಿರುತ್ತದೆ.<br>- ಮಂಗಳೂರು ಜಿಲ್ಲಾ ಕಾರಾಗೃಹಕ್ಕೆ ಕೆ.ಎಸ್.ಐ.ಎಸ್.ಎಫ್. ಸಿಬ್ಬಂದಿಗಳನ್ನು ಕಾರಾಗೃಹದ ಸುತ್ತಲೂ ಗಸ್ತಿಗಾಗಿ ಮತ್ತು ಮುಖ್ಯದ್ವಾರ ಹಾಗೂ ಸಂದರ್ಶನ ವಿಭಾಗಗಳಲ್ಲಿ ಭದ್ರತೆ ತಪಾಸಣೆ ಹಾಗೂ ಗಸ್ತು ನಿರ್ವಹಣೆ ಕರ್ತವ್ಯಕ್ಕೆ ನಿಯೋಜಿಸ ಲಾಗಿರುತ್ತದೆ. ದಿನದ 24x7 ಘಂಟೆಗಳ ಕಾಲ ಕಾರಾಗೃಹಕ್ಕೆ ಆಗಮಿಸುವ ಮತ್ತು ನಿರ್ಗಮಿಸುವ |

| | | |
|---|---|---|
| | | ಎಲ್ಲಾ ವ್ಯಕ್ತಿಗಳನ್ನು ಭದ್ರತಾ ಉಪಕರಣಗಳು ಮತ್ತು ಬ್ಯಾಗೇಜ್ ಸ್ಕ್ಯಾನರ್ ಮೂಲಕ ಹಾಗೂ ಸಿಬ್ಬಂದಿಗಳಿಂದ ಭೌತಿಕವಾಗಿ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ.<br>- ಅಧಿಕಾರಿ / ಸಿಬ್ಬಂದಿಗಳ ನೇತೃತ್ವದಲ್ಲಿ ತಂಡಗಳನ್ನು ರಚಿಸಿ ಮೇಲಿಂದ ಮೇಲೆ ಅನಿರೀಕ್ಷಿತ ತಪಾಸಣೆ ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ. ಪ್ರತಿನಿತ್ಯ ಬಂದಿಗಳನ್ನು ಹಾಗೂ ಬಂದಿಗಳ ಕೊಠಡಿಗಳನ್ನು ಅನಿರೀಕ್ಷಿತವಾಗಿ ತಪಾಸಣೆಗೆ ಒಳಪಡಿಸಲಾಗುತ್ತಿದೆ.<br>- ಬಂದಿಗಳ ನಡುವಿನ ಗುಂಪು ಘರ್ಷಣೆಯನ್ನು ತಪ್ಪಿಸಲು ಬಂದಿಯ ಹಿನ್ನೆಲೆಯನ್ನು ತಿಳಿದು ಸೂಕ್ತ ರೀತಿಯಲ್ಲಿ ನಿಗಾವಹಿಸಿ ಬಂದಿಗಳ ನಡುವೆ ಘರ್ಷಣೆಯಾಗದಂತೆ ಕ್ರಮವಹಿಸಲು ಸೂಚಿಸಿದೆ.<br>- ಪೊಲೀಸ್ ಇಲಾಖೆ ಮತ್ತು ಕಾರಾಗೃಹ ಇಲಾಖೆಯ ಸಹಯೋಗದಲ್ಲಿ ಕಾರಾಗೃಹದ ಬಂದಿಗಳನ್ನು ಹಾಗೂ ಬಂದಿಗಳ ಕೊಠಡಿಗಳನ್ನು ಅನಿರೀಕ್ಷಿತವಾಗಿ ತಪಾಸಣೆ ಕೈಗೊಳ್ಳಲಾಗುತ್ತಿದೆ.<br>- ಭದ್ರತಾ ಉಪಕರಣಗಳಾದ Deep Search Metal Detector, HHMD, FG-1 Security Pole, DFMD and Body Worn Cameras ಗಳನ್ನು ಒದಗಿಸಿದ್ದು, ಸದರಿ ಉಪಕರಣಗಳಿಂದ ಕಾರಾಗೃಹಗಳಲ್ಲಿ ಬಳಸಿ ತಪಾಸಣೆ ಕೈಗೊಳ್ಳಲಾಗುತ್ತಿದೆ.<br>- ಕಾರಾಗೃಹಗಳಲ್ಲಿ ಬಂದಿಗಳ ತಪಾಸಣೆ ಸಮಯದಲ್ಲಿ ಮೊಬೈಲ್ ಮತ್ತು ಇನ್ನಿತರ ನಿಷೇಧಿತ ವಸ್ತುಗಳು ಕಂಡುಬಂದಲ್ಲಿ ಅಂತಹವರ ವಿರುದ್ಧ ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022 ಕಲಂ 42 ರನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.<br>- ಮಂಗಳೂರು ಕಾರಾಗೃಹದಲ್ಲಿ ಅಳವಡಿಸಲಾಗಿರುವ 5 ಸಂಖ್ಯೆ ಮೊಬೈಲ್ ಜಾಮರ್‌ಗಳನ್ನು ದುರಸ್ತಿ ಮತ್ತು 4ಜಿ/5ಜಿ ಗೆ ಮೇಲ್ದರ್ಜೇಗೇರಿಸಲು ಕ್ರಮ ಕೈಗೊಳ್ಳಲಾಗಿದ್ದು, ಜಾಮರ್‌ಗಳ ದುರಸ್ತಿ ಮತ್ತು ಮೇಲ್ದರ್ಜೆಗೇರಿಸುವ ಕಾರ್ಯ ಪ್ರಗತಿಯಲ್ಲಿದ್ದು, Testing and Recalibration ಹಂತದಲ್ಲಿರುತ್ತದೆ. ಕಾರಾಗೃಹದ ಒಳಭಾಗದಲ್ಲಿ ಯಾವುದೇ ನೆಟ್‌ವರ್ಕ್ ದೊರೆಯದಂತೆ ಹಾಗೂ ಕಾರಾಗೃಹದ ಹೊರಭಾಗದಲ್ಲಿ ಸಾರ್ವಜನಿಕರಿಗೆ ನೆಟ್‌ವರ್ಕ್ ತೊಂದರೆ ಯಾಗದಂತೆ ಅಗತ್ಯ ಕ್ರಮವಹಿಸುವಂತೆ |

| | | |
|---|---|---|
| | | M/s TCIL ಮತ್ತು Department of Telecommunication ರವರಿಗೆ ತಿಳಿಸಲಾಗಿರುತ್ತದೆ.<br><br>**ಸರ್ಕಾರವು ಈ ಕೆಳಕಂಡ ಆದೇಶ ಮತ್ತು ಸುತ್ತೋಲೆಗಳಲ್ಲಿ ಭದ್ರತೆ ಮತ್ತು ತಪಾಸಣೆ ಸಲುವಾಗಿ ನಿರ್ದೇಶನ ನೀಡಿದ್ದು, ಆದರನ್ವಯ ಅಗತ್ಯ ಕ್ರಮ ಕೈಗೊಳ್ಳಲಾಗಿದೆ.**<br><br>- ಸರ್ಕಾರದ ಸುತ್ತೋಲೆ ಸಂಖ್ಯೆ:ಹೆಚ್‌ಡಿ 03 ಪಿಆರ್‌ಎ 2010, ದಿನಾಂಕ: 22.03.2010ರಲ್ಲಿ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಅನಿರೀಕ್ಷಿತ ತಪಾಸಣೆಗಳನ್ನು ನಡೆಸಲು ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ. |
| | | - ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 187 ಪಿಆರ್ ಎ 2021, ದಿನಾಂಕ: 28.03.2022ರಲ್ಲಿ ಕರ್ನಾಟಕ ಕಾರಾಗೃಹಗಳ ನಿಯಮಗಳು-1974ರ ನಿಯಮ 42(3) ರಲ್ಲಿನ ನಿಷೇಧಿತ ವಸ್ತುಗಳ ಪಟ್ಟಿಗೆ (ಕರ್ನಾಟಕ ಕಾರಾಗೃಹ (ತಿದ್ದುಪಡಿ) ನಿಯಮಗಳು-2022) ರಂತೆ ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ. ನಿಷೇಧಿತ ವಸ್ತುಗಳ ಪಟ್ಟಿಗೆ ಮೊಬೈಲ್ ಮತ್ತು ನಿಷೇಧಿತ ವಸ್ತುಗಳನ್ನು ಸೇರ್ಪಡೆಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ.<br>- ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 09 ಶಾಸನ 2022, ದಿನಾಂಕ: 05.04.2022ರಲ್ಲಿ ಕರ್ನಾಟಕ ಬಂದೀಖಾನೆಗಳ ಅಧಿನಿಯಮ, 1963ರ ಕಲಂ 42ಕ್ಕೆ (ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022) ರಲ್ಲಿ, ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ. ನಿಷೇಧಿತ ವಸ್ತುಗಳ ಬಳಕೆ ಮಾಡಿದಲ್ಲಿ ಮೂರು ವರ್ಷಗಳಿಗೆ ಕಡಿಮೆ ಇಲ್ಲದ ಮತ್ತು ಐದು ವರ್ಷಗಳವರೆಗೆ ಶಿಕ್ಷೆ ಮತ್ತು ದಂಡನೆಗೆ ಒಳಪಡಿಸಲಾಗುತ್ತಿದೆ.<br>- ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 37 ಪಿಆರ್‌ಎ 2022, ದಿನಾಂಕ: 17.03.2022ರಲ್ಲಿ ಪೊಲೀಸ್ ಆಯುಕ್ತರು/ ಜಿಲ್ಲಾ ಪೊಲೀಸ್ ಅಧೀಕ್ಷಕರುಗಳು ಹಾಗೂ ಕಾರಾಗೃಹಗಳ ಮುಖ್ಯ ಅಧೀಕ್ಷಕರು / ಅಧೀಕ್ಷಕರುಗಳಿಗೆ ಕಾರಾಗೃಹಗಳಲ್ಲಿನ ಭದ್ರತೆ ಮತ್ತು ತಪಾಸಣೆ ಕುರಿತಂತೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ. |

| | | |
|---|---|---|
| ಇ) | ಪ್ರಸ್ತುತ ಕಾರಾಗೃಹದಲ್ಲಿರುವ ಕೈದಿಗಳ ಸಂಖ್ಯೆ ಎಷ್ಟು; ಎಷ್ಟು ಮಂದಿ ಕೈದಿಗಳಿಗೆ ಸ್ಥಳಾವಕಾಶದ ಲಭ್ಯತೆ ಇರುತ್ತದೆ; (ವಿವರ ನೀಡುವುದು) | - ದಿನಾಂಕ: 14-03-2025 ರಲ್ಲಿದ್ದಂತೆ 331 ಪುರುಷ ಬಂದಿಗಳು 21 ಮಹಿಳಾ ಬಂದಿಗಳು ಸೇರಿ ಒಟ್ಟು 352 ಬಂದಿಗಳು ಕಾರಾಗೃಹದಲ್ಲಿ ದಾಖಲಿರುತ್ತಾರೆ.<br>- ಕಾರಾಗೃಹದಲ್ಲಿ 200 ಪುರುಷ ಬಂದಿಗಳು 10 ಮಹಿಳಾ ಬಂದಿಗಳು ಸೇರಿ ಒಟ್ಟು 210 ಬಂದಿಗಳಿಗೆ ಅಧಿಕೃತ ಸ್ಥಳಾವಕಾಶ ಇರುತ್ತದೆ. |
| ಈ) | ಇತ್ತೀಚಿಗೆ ಕಾರಾಗೃಹದಲ್ಲಿ 45 ಮಂದಿ ಕೈದಿಗಳು ಫುಡ್ ಪಾಯ್ಸನ್ ದಿಂದ ಅಸ್ವಸ್ಥಗೊಳ್ಳಲು ಕಾರಣಗಳೇನು: ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು) | - ದಿನಾಂಕ: 05.03.2025 ರಂದು 349 ಬಂದಿಗಳು ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ದಾಖಲಿರುತ್ತಾರೆ. ಸದರಿ ಬಂದಿಗಳಿಗೆ ಬೆಳಿಗ್ಗೆ 7.45 ಗಂಟೆಗೆ ಬುಧವಾರದ ಬೆಳಗಿನ ಉಪಾಹಾರ ಅವಲಕ್ಕಿ ಮತ್ತು ಟೀ ವಿತರಿಸಲಾಗಿರುತ್ತದೆ. ಸಮಯ 11.00 ಗಂಟೆಗೆ ಮಧ್ಯಾಹ್ನದ ಊಟವಾದ ಅನ್ನ, ಚಪಾತಿ, ಸಾಂಬರ್ ಮತ್ತು ಮಜ್ಜಿಗೆಯನ್ನು ಬಂದಿಗಳಿಗೆ ವಿತರಿಸಲಾಗಿರುತ್ತದೆ.<br>- ಸಮಯ 15.35ಕ್ಕೆ ಇಬ್ಬರು ವಿಚಾರಣಾ ಬಂದಿಗಳು ವಾಂತಿ ಬೇಧಿ ಆಗುತ್ತಿದೆ ಎಂದು ಆಸ್ಪತ್ರೆಗೆ ಕಳುಹಿಸುವಂತೆ ಕೋರಿರುತ್ತಾರೆ. ಅವರನ್ನು ಆಸ್ಪತ್ರೆಗೆ ಕಳುಹಿಸುವ ಸಂದರ್ಭದಲ್ಲಿ ಎ ಮತ್ತು ಬಿ ಬ್ಯಾರಕ್ ನಿಂದ ಮತ್ತಷ್ಟು ಬಂದಿಗಳು ವಾಂತಿ ಬೇಧಿ ಎಂದು ತಿಳಿಸಿರುತ್ತಾರೆ. ವಾಂತಿ ಬೇಧಿಯಿಂದ ಅನಾರೋಗ್ಯಕ್ಕೊಳಗಾದ ಬಂದಿಗಳು ಹೆಚ್ಚಾಗಿದ್ದರಿಂದ ತಕ್ಷಣವೇ ಜಿಲ್ಲಾ ಆರೋಗ್ಯ ಅಧಿಕಾರಿಗಳು / ತಾಲ್ಲೂಕು ಆರೋಗ್ಯ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಕಾರಾಗೃಹಕ್ಕೆ ತುರ್ತಾಗಿ ವೈದ್ಯಾಧಿಕಾರಿಗಳನ್ನು ಕಳುಹಿಸುವಂತೆ ಕೋರಲಾಗಿ 4 ಜನ ವೈದ್ಯಾಧಿಕಾರಿಗಳ ತಂಡ ತಕ್ಷಣ ಕಾರಾಗೃಹಕ್ಕೆ ಆಗಮಿಸಿ ಬಂದಿಗಳನ್ನು ಪರೀಕ್ಷಿಸಿರುತ್ತಾರೆ.<br>- ಬಂದಿಗಳನ್ನು ಪರೀಕ್ಷಿಸಿದ ವೈದ್ಯಾಧಿಕಾರಿಗಳು ತಕ್ಷಣ ಹೆಚ್ಚಿನ ಚಿಕಿತ್ಸೆಗಾಗಿ ಕಳುಹಿಸಲು ಸೂಚಿಸಿದರನ್ವಯ ಸದರಿ ವಿಷಯವಾಗಿ ಪೊಲೀಸ್ ಆಯುಕ್ತರು ಮಂಗಳೂರು ನಗರ ರವರಿಗೆ ಮತ್ತು ಕಾರಾಗೃಹ ವ್ಯಾಪ್ತಿಯ ಬರ್ಕೆ ಪೊಲೀಸ್ ಠಾಣೆಗೆ ಕರೆ ಮಾಡಿ ಮಾಹಿತಿ ತಿಳಿಸಿ ಪೊಲೀಸ್ ಮತ್ತು ಕಾರಾಗೃಹದ ಸಿಬ್ಬಂದಿಗಳ ಬೆಂಗಾವಲಿನಲ್ಲಿ 59 ಜನ ಬಂದಿಗಳನ್ನು ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಗೆ ದಾಖಲಿಸಲಾಗಿರುತ್ತದೆ.<br>- ಬಂದಿಗಳ ಆರೋಗ್ಯದ ಹಿತದೃಷ್ಟಿಯಿಂದ ವೈದ್ಯಾಧಿಕಾರಿಗಳು ಕಾರಾಗೃಹದಲ್ಲಿಯೇ ರಾತ್ರಿ ಸಹ ಕರ್ತವ್ಯ ನಿರ್ವಹಿಸಿರುತ್ತಾರೆ. |

| | | |
|---|---|---|
| | | - ಮಹಾನಿರ್ದೇಶಕರು, ಕಾರಾಗೃಹ ಮತ್ತು ಸುಧಾರಣಾ ಸೇವೆ ರವರೊಂದಿಗೆ ಹೆಚ್ಚುವರಿ ಕಾರಾಗೃಹ ಮಹಾನಿರೀಕ್ಷಕರು ಹಾಗೂ ಕಾರಾಗೃಹಗಳ ಉಪಮಹಾನಿರೀಕ್ಷಕರು ದಕ್ಷಿಣ ವಲಯ ಬೆಂಗಳೂರು ರವರು ಮಂಗಳೂರು ಜಿಲ್ಲಾ ಸರ್ಕಾರಿ ವೆನ್ ಲಾಕ್ ಆಸ್ಪತ್ರೆಗೆ ಭೇಟಿ ನೀಡಿ ಬಂದಿಗಳ ಯೋಗಕ್ಷೇಮ ವಿಚಾರಿಸಿರುತ್ತಾರೆ. ಆಸ್ಪತ್ರೆಯ ವೈದ್ಯಾಧಿಕಾರಿಗಳನ್ನು ಭೇಟಿ ಮಾಡಿ ಬಂದಿಗಳ ಆರೋಗ್ಯದ ಕುರಿತು ವಿಚಾರಿಸಲಾಗಿ, ವೈದ್ಯಾಧಿಕಾರಿಗಳು ಬಂದಿಗಳಿಗೆ ಯಾವುದೇ ಪ್ರಾಣಾಪಾಯ ಇರುವುದಿಲ್ಲವೆಂದು ತಿಳಿಸಿರುತ್ತಾರೆ. ನಿಗಾವಣೆ ಅವಧಿ ಮುಕ್ತಾಯದ ನಂತರ ಹಂತ ಹಂತವಾಗಿ ಬಂದಿಗಳನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಿರುವುದಾಗಿ ತಿಳಿಸಿರುತ್ತಾರೆ.<br><br>- ಸದರಿ ವಿಷಯವಾಗಿ ಬರ್ಕೆ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 27/2025 ರಂತೆ ಪ್ರಕರಣ ದಾಖಲಿಸಲಾಗಿರುತ್ತದೆ. ಸದರಿ ಪ್ರಕರಣದ ಕುರಿತು ಕಾರಾಗೃಹದ ಉಪಮಹಾನಿರೀಕ್ಷಕರು ದಕ್ಷಿಣ ವಲಯ ಬೆಂಗಳೂರು ರವರಿಗೆ ಆಂತರಿಕ ವಿಚಾರಣೆ ಮಾಡಿ ವರದಿ ಸಲ್ಲಿಸಲು ಆದೇಶಿಸಲಾಗಿರುತ್ತದೆ.<br><br>- ಪ್ರಸ್ತುತ ಮಂಗಳೂರು ಜಿಲ್ಲಾ ಕಾರಾಗೃಹದ ಪರಿಸ್ಥಿತಿ ಹತೋಟಿಯಲ್ಲಿದ್ದು, ಸಂಪೂರ್ಣ ನಿಯಂತ್ರಣ ವಾಗುವವರೆಗೆ ಕಾರಾಗೃಹಗಳ ಉಪಮಹಾ ನಿರೀಕ್ಷಕರು, ದಕ್ಷಿಣ ವಲಯ ಬೆಂಗಳೂರು ರವರಿಗೆ ಮಂಗಳೂರಿನಲ್ಲಿಯೇ ವಾಸ್ತವ್ಯ ಹೂಡಲು ಆದೇಶಿಸಲಾಗಿರುತ್ತದೆ.<br><br>- ವೆನ್‌ಲಾಕ್ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ದಾಖಲಾಗಿದ್ದ ಎಲ್ಲಾ ಬಂದಿಗಳು ಚೇತರಿಸಿಕೊಂಡು ಕಾರಾಗೃಹಕ್ಕೆ ಮರಳಿ ದಾಖಲಾಗಿರುತ್ತಾರೆ.<br><br>- ಬಂದಿಗಳ ವಾಂತಿ ಬೇಧಿ ವಿಷಯವಾಗಿ ಜಿಲ್ಲಾ ಆರೋಗ್ಯ ಅಧಿಕಾರಿಗಳು ಕಾರಾಗೃಹದಲ್ಲಿ ತಯಾರಿಸಿದ ಆಹಾರ, ನೀರು ಮತ್ತು ಆಹಾರ ಕಚ್ಚಾ ಪದಾರ್ಥಗಳ ಮಾದರಿಯನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಮೈಸೂರು ಪ್ರಯೋಗಾಲಯಕ್ಕೆ ಕಳುಹಿಸಿರುತ್ತಾರೆ. ಆಹಾರ ಪದಾರ್ಥಗಳ ಪರೀಕ್ಷಾ ವರದಿಯು ಇನ್ನೂ ಸ್ವೀಕೃತವಾಗಿರುವುದಿಲ್ಲ.<br><br>- ಕಾರಾಗೃಹದ ಅಡಿಗೆ ಮನೆ, ದಾಸ್ತಾನು ಕೊಠಡಿ, ಆಹಾರ ತಯಾರಿಸುವ ಬಂದಿಗಳ ಸ್ವಚ್ಛತೆಗೆ ಹೆಚ್ಚಿನ ನಿಗಾವಹಿಸಲಾಗಿದ್ದು, ಪ್ರತಿ ದಿನ ಜಿಲ್ಲಾ ಸರ್ಕಾರಿ ಆಸ್ಪತ್ರೆ ವೆನ್‌ಲಾಕ್ ನಿಂದ ಒಬ್ಬ ವೈದ್ಯಾಧಿಕಾರಿಗಳು ಕಾರಾಗೃಹಕ್ಕೆ ಭೇಟಿ ನೀಡಿ ಬಂದಿಗಳ ಆರೋಗ್ಯದ ಕುರಿತು ಪರೀಕ್ಷೆ ನಡೆಸಲು ಕ್ರಮವಹಿಸಲಾಗಿದೆ. |

| | | |
|---|---|---|
| ಉ) | ಕಾರಾಗೃಹದಲ್ಲಿ ಧರ್ಮದ ಆಧಾರದಲ್ಲಿ ಕೈದಿಗಳಿಗೆ ವಿಭಾಗವನ್ನು ಮಾಡಿ, ಆಯಾ ಧರ್ಮದ ಹೆಸರಿನಲ್ಲಿ ಕೈದಿಗಳನ್ನು ಇರಿಸಲಾಗಿದೆ ಎಂಬ ವರದಿ ನಿಜವೇ? (ಈ ಬಗ್ಗೆ ವಿವರ ನೀಡುವುದು) | ಮಂಗಳೂರು ಕಾರಾಗೃಹವು ಅತೀ ಸೂಕ್ಷ್ಮ ಕಾರಾಗೃಹವಾಗಿದ್ದು, ವಿರೋಧಿ ಗುಂಪುಗಳ ಬಂದಿಗಳು ಹೆಚ್ಚಾಗಿ ದಾಖಲಾಗುತ್ತಿದ್ದುದ್ದರಿಂದ, ಯಾವುದೇ ಅಹಿತಕರ ಘಟನೆಗಳು ಸಂಭವಿಸುವುದನ್ನು ತಡೆಗಟ್ಟಲು ಮುಂಜಾಗ್ರತೆಗಾಗಿ ಮತ್ತು ಬಂದಿಗಳ ಭದ್ರತೆ ಹಾಗೂ ಆಡಳಿತ ಹಿತದೃಷ್ಟಿಯಿಂದ ವಿರೋಧಿ ಗುಂಪಿನ ಬಂದಿಗಳನ್ನು ಪ್ರತ್ಯೇಕವಾಗಿ ಇರಿಸಲಾಗಿದೆಯೇ ವಿನಃ ಧರ್ಮದ ಹೆಸರಿನಲ್ಲಿ ಬಂದಿಗಳ ವಿಭಾಗ ಮಾಡಿರುವುದಿಲ್ಲ. |

ಸಂಖ್ಯೆಃ ಹೆಚ್‌ಡಿ 82 ಪಿಆರ್‌ಎ 2025

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು